MVC No.16/2022 PW-1

**<u>ದಿನಾಂಕ 18.06.2026 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲುಃ ಎದುರುದಾರರಾದ ಆರ್ 2 ಪರ ಶ್ರೀ ಜೆ ಎಸ್ ವಕೀಲರಿಂದಃ</u>**

ನನಗೆ 3 ಜನ ಮಕ್ಕಳು. ಅವರ ಹೆಸರು ಶೋಭಾ, ಚೆಲುವರಾಜು ಮತ್ತು ಮೃತ ಲೋಕೇಶ್. ಚೆಲುವರಾಜುರವರಿಗೆ ಮದುವೆಯಾಗಿ ಪ್ರತ್ಯೇಕವಾಗಿದ್ದಾರೆ. ಶೋಭಾ ರವರಿಗೆ ಮದುವೆಯಾಗಿ ಪ್ರತ್ಯೇಕವಾಗಿದ್ದಾರೆ. ಮೃತ ಲೋಕೇಶ್ ಮದುವೆಯಾಗಿರಲಿಲ್ಲ. ಅಪಘಾತವನ್ನು ಕಣ್ಣಾರೆ ನೋಡಿಲ್ಲ. ಅಪಘಾತವಾದ ನಂತರ ಚನ್ನಪಟ್ಟಣ ಸರ್ಕಾರಿ ಆಸ್ಪತ್ರೆಯಲ್ಲಿ ನೋಡಿರುತ್ತೇನೆ. ಅವರು ಸ್ಥಳದಲ್ಲಿ ಮೃತ ಪಟ್ಟಿದ್ದರು. ನಾನು ಅಪಘಾತವಾದ ಸ್ಥಳವನ್ನು ನೋಡಿಲ್ಲ. ಅಪಘಾತದ ಬಗ್ಗೆ ತಿಳಿದುಕೊಂಡಿರುತ್ತೇನೆ. ಅಪಘಾತವನ್ನು ಕಣ್ಣಾರೆ ನೋಡಿದ ಪ್ರತ್ಯಕ್ಷದರ್ಶಿಯವರನ್ನು ನ್ಯಾಯಾಲಯಕ್ಕೆ ಕರೆತಂದು ಸಾಕ್ಷ್ಯಾ ನುಡಿಸುತ್ತೇನೆ. ನನ್ನ ಮಗನ ಅಂತ್ಯ ಸಂಸ್ಕಾರಕ್ಕೆ 3 ಲಕ್ಷ ರೂಪಾಯಿ ಹಣ ಖರ್ಚಾಗಿದೆ ಎಂದು ಹೇಳಿದ್ದು ಅದು ಸುಳ್ಳು ಎಂದರೆ ಸುಳ್ಳು.

ನನ್ನ ಮಗ ಕೂಲಿ ಕೆಲಸ ಮಾಡುತ್ತಿದ್ದ. ನನ್ನ ಮಗ ಅಪಘಾತವಾಗುವುದಕ್ಕಿಂತ ಮುಂಚೆ ಕೂಲಿ ಕೆಲಸ ಮಾಡಿ ತಿಂಗಳಿಗೆ 20 ಸಾವಿರ ಸಂಪಾದನೆ ಮಾಡುತ್ತಿದ್ದ ಎಂದು ಹೇಳಿದ್ದು ಆ ರೀತಿ ಹೇಳಿರುವುದು ಸುಳ್ಳು ಎಂದರೆ ಸುಳ್ಳು. ಆ ಬಗ್ಗೆ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸುಳ್ಳು. ನನ್ನ ಮಗನಿಗೆ ಅಪಘಾತವಾದಾಗ 40 ವರ್ಷ ವಯಸ್ಸಾಗಿತ್ತು. ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಅರ್ಜಿ ಹಾಕಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು.

**<u>ಮರುವಿಚಾರಣೆಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

**(ವೆಂಕಟೇಶಪ್ಪ. ವಿ)**
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**